# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 994
ಸದಸ್ಯರ ಹೆಸರು : ಶ್ರೀ ರಾಜೇಂದ್ರ ರಾಜಣ್ಣ
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 24.02.2023

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ತುಮಕೂರು ಜಿಲ್ಲಾ ವಿಭಾಗದಲ್ಲಿ ಇರುವ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್‌ಗಳ ಸಂಖ್ಯೆ ಎಷ್ಟು; ಚಾಲಕರ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು) | ತುಮಕೂರು ಜಿಲ್ಲೆ ವ್ಯಾಪ್ತಿಯಲ್ಲಿರುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ 08 ಘಟಕಗಳಲ್ಲಿ ಒಟ್ಟು 651 ಬಸ್‌ಗಳು ಕಾರ್ಯಾಚರಿಸುತ್ತಿದ್ದು, ಸದರಿ ವಿಭಾಗದಲ್ಲಿ ಒಟ್ಟು ಚಾಲಕರು 654, ನಿರ್ವಾಹಕರು 231 ಮತ್ತು ಚಾಲಕ-ಕಂ-ನಿರ್ವಾಹಕರು 871 ಜನ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. |
| ಆ | ಗ್ರಾಮೀಣ ಪ್ರದೇಶದಿಂದ ಜಿಲ್ಲಾ ಕೇಂದ್ರವಾದ ತುಮಕೂರಿಗೆ ಬರುವ ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ಬಸ್ ಸೌಲಭ್ಯ ಇಲ್ಲದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ಶಾಲಾ-ಕಾಲೇಜು ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕ ಪ್ರಯಾಣಿಕರ ಅವಶ್ಯಕತೆಗನುಗುಣವಾಗಿ ಪ್ರಸ್ತುತ ತುಮಕೂರು ವಿಭಾಗದಿಂದ 568 ಅನುಸೂಚಿಗಳಿಂದ 821 ವೇಗದೂತ ಸುತ್ತುವಳಿಗಳು, 632 ನಗರ ಸುತ್ತುವಳಿಗಳು ಮತ್ತು 2634 ಸಾಮಾನ್ಯ ಸುತ್ತುವಳಿಗಳು ಸೇರಿದಂತೆ ಒಟ್ಟು 4087 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಅಲ್ಲದೇ, ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿ ಖಾಸಗಿ ಪ್ರವರ್ತಕರು ಸಹ ಸಾರಿಗೆ ಸೌಲಭ್ಯವನ್ನು ಕಲ್ಪಿಸುತ್ತಿದ್ದು, ಇವುಗಳ ಅನುಕೂಲತೆಯನ್ನು ಸಹ ಈ ಭಾಗದ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಪಡೆದುಕೊಳ್ಳುತ್ತಿದ್ದಾರೆ.<br><br>ಆದಾಗ್ಯೂ, ಬೇಡಿಕೆಗೆ ಅನುಗುಣವಾಗಿ ಹಂತಹಂತವಾಗಿ ಮೂಲಭೂತ ಸಂಪನ್ಮೂಲಗಳನ್ನು ಕ್ರೋಢೀಕರಿಸಿಕೊಂಡು ಮಾರ್ಗ ಸಮೀಕ್ಷೆ ಕೈಗೊಂಡು ಪರಿಶೀಲಿಸಿ ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ | ಬಂದಿದ್ದಲ್ಲಿ, ಬಸ್ ಸೌಲಭ್ಯವನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | |

ಸಂಖ್ಯೆ: ಟಿಡಿ 65 ಟಿಸಿಕ್ಯೂ 2023

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು